**All India Radio: Bangalore**
**National Bulletin In Kannada**
**11.05.2026 3.00 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**11.05.2026 13.10 pm**

**<>><><*><><<>**

ಮುಖ್ಯಾಂಶಗಳು

**೧. ಸೋಮನಾಥ ಅಮೃತ ಪರ್ವ ಹಿನ್ನೆಲೆ; ಗುಜರಾತ್‌ನಲ್ಲಿ ಪ್ರಧಾನಿ ರೋಡ್ ಶೋ; ಪರಮಾಣ ಪರೀಕ್ಷೆ ನಡೆಸಿದ ವಿಜ್ಞಾನಿಗಳ ಕಾರ್ಯಕ್ಕೆ ಶ್ಲಾಘನೆ**

**೨. ಜುಲೈ ೧ ರಿಂದ ವಿಕಸಿತ ಭಾರತ ರೋಜ್‌ಗಾರ್ ಮತ್ತು ಅಜೀವಿಕಾ ಕಾಯ್ದೆ-೨೦೨೫ ಜಾರಿಗೆ ಕೇಂದ್ರ ಸರ್ಕಾರ ಸೂಚನೆ**

**೩. ಇಂದು ರಾಷ್ಟ್ರೀಯ ತಂತ್ರಜ್ಞಾನ ದಿನ ; ದೇಶದ ಜನತೆಗೆ ಉಪರಾಷ್ಟ್ರಪತಿ, ಪ್ರಧಾನಿ ಸೇರಿ ಗಣ್ಯರಿಂದ ಶುಭಾಶಯ**

**೪. ವಿದೇಶಿ ವಿನಿಮಯದ ಅಗತ್ಯವಿರುವ ವಸ್ತುಗಳ ಮೇಲಿನ ವೆಚ್ಚ ಕಡಿಮೆ ಮಾಡುವಂತೆ ಸಚಿವ ಅಶ್ವಿನಿ ವೈಷ್ಣವ್ ಕರೆ**

**೫. ಐಪಿಎಲ್ ಟಿ-೨೦ ಕ್ರಿಕೆಟ್ ; ಇಂದು ಪಂಜಾಬ್ ಕಿಂಗ್ಸ್-ಡೆಲ್ಲಿ ಕ್ಯಾಪಿಟಲ್ಸ್ ತಂಡಗಳ ಮುಖಾಮುಖಿ**

**<>><><*><><<>**

ಸೋಮನಾಥ ಅಮೃತ ಪರ್ವದ ಆಚರಣೆಯಲ್ಲಿ ಭಾಗವಹಿಸಲು ಪ್ರಧಾನಿ ನರೇಂದ್ರ ಮೋದಿ ಇಂದು ಗುಜರಾತ್‌ನ ಪ್ರಭಾಸ್ ಪಠಾಣ್‌ಗೆ ತೆರಳಿದ್ದು, ಹೆಲಿಪ್ಯಾಡ್‌ನಲ್ಲಿ ಇಳಿದ ನಂತರ, ಪ್ರಧಾನಿ ಹಮೀರ್ಜಿ ಗೋಹಿಲ್ ವೃತ್ತದವರೆಗೆ ಒಂದು ಕಿಲೋಮೀಟರ್ ರೋಡ್ ಶೋ ನಡೆಸಿದರು. ಈ ಸಮಯದಲ್ಲಿ ಭಾರಿ ಜನಸಮೂಹ ಜಮಾಯಿಸಿ ಪ್ರಧಾನಿ ಅವರನ್ನು ಸ್ವಾಗತಿಸಿದರು. ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಮತ್ತು ಉಪಮುಖ್ಯಮಂತ್ರಿ ಹರ್ಷ ಸಾಂಘವಿ ಕೂಡ ಪ್ರಧಾನಿ ಅವರೊಂದಿಗೆ ರೋಡ್ ಶೋನಲ್ಲಿ ಭಾಗವಹಿಸಿದ್ದರು. ಬಳಿಕ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ, ಮಾತನಾಡಿದ ಪ್ರಧಾನಿ ಮೋದಿ ಸೋಮನಾಥ ದೇವಾಲಯವು ಅಚಲ ನಂಬಿಕೆ, ದೈವತ್ವ ಮತ್ತು ದೇಶದ ಶಾಶ್ವತ ಆತ್ಮದ ಪವಿತ್ರ ಸಂಕೇತವಾಗಿದೆ ಎಂದು ಬಣ್ಣಿಸಿದ್ದಾರೆ. ಸೋಮನಾಥ ಅಮೃತ್ ಪರ್ವ್ ಕೇವಲ

ಭೂತಕಾಲವನ್ನು ಆಚರಿಸುವ ಹಬ್ಬವಲ್ಲ,. ಇದು ಮುಂದಿನ ಒಂದು ಸಾವಿರ ವರ್ಷಗಳ ಕಾಲ ದೇಶದ ಸ್ಫೂರ್ತಿಯಾಗಲಿದೆ ಎಂದು ಹೇಳಿದ್ದಾರೆ. ಜಗತ್ತಿನ ಯಾವುದೇ ಶಕ್ತಿಯು ಭಾರತವನ್ನು ತಲೆಬಾಗಿಸಲು ಅಥವಾ ನಿಗ್ರಹಿಸಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ. ೧೯೯೮ರ ಮೇ ೧೧ ರಂದು ಮೊದಲ ಮೂರು ಪರಮಾಣು ಪರೀಕ್ಷೆಗಳನ್ನು ನಡೆಸಲಾಯಿತು. ಈ ಮೂಲಕ ದೇಶದ ವಿಜ್ಞಾನಿಗಳು ಭಾರತದ ಸಾಮರ್ಥ್ಯಗಳನ್ನು ಇಡೀ ಜಗತ್ತಿಗೆ ಪ್ರದರ್ಶಿಸಿದರು. ಈ ಪರೀಕ್ಷೆಗಳು ದೇಶದ ರಾಜಕೀಯ ಇಚ್ಛಾಶಕ್ತಿ ಎಷ್ಟು ಅಚಲ ಎಂಬುದನ್ನು ಜಗತ್ತಿಗೆ ಪ್ರದರ್ಶಿಸಿವೆ ಎಂದು ಹೇಳಿದ್ದಾರೆ.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೨೪ ಸೆಕೆಂಡ್ಸ್)**

ಇದಕ್ಕೂ ಮೊದಲು ಪ್ರಧಾನಿ, ಮೊದಲ ಜ್ಯೋತಿರ್ಲಿಂಗವಾದ ಸೋಮನಾಥ ದೇವಾಲಯದಲ್ಲಿ ವಿಶೇಷ ಮಹಾಪೂಜೆ ಸಲ್ಲಿಸಿದರು. ಸೋಮನಾಥ ದೇವಾಲಯದ ಗೋಪುರದ ಮೇಲೆ ಕುಂಭಾಭಿಷೇಕ ವಿಧಿವಿಧಾನವನ್ನು ನೆರವೇರಿಸಿದರು. ದೇವಾಲಯದ ಇತಿಹಾಸದಲ್ಲಿ ಮೊದಲ ಬಾರಿಗೆ, ೧೧ ಯಾತ್ರಾ ಸ್ಥಳಗಳಿಂದ ಬಂದ ಪವಿತ್ರ ನೀರನ್ನು ಬಳಸಿ ದೇವಾಲಯದ ಶಿಖರದ ಮೇಲೆ ಜಲಭಿಷೇಕವನ್ನು ನಡೆಸಲಾಯಿತು. ಧ್ವಜಾರೋಹಣ ಸಮಾರಂಭದಲ್ಲಿಯೂ ಪ್ರಧಾನಿ ಭಾಗವಹಿಸಿದ್ದರು.

**<>><><*><><<>**

ಸೋಮನಾಥ ದೇವಾಲಯ ಪುನರ್‌ನಿರ್ಮಾಣಕ್ಕೆ ೭೫ ವರ್ಷಗಳಾಗಿರುವ ಹಿನ್ನೆಲೆ ಸೋಮನಾಥ ಸ್ವಾಭಿಮಾನ್ ಉತ್ಸವದ ಸಂದರ್ಭದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ದೇಶವಾಸಿಗಳಿಗೆ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಉತ್ಸವವು ಭಾರತದ ಶಾಶ್ವತ ಶಕ್ತಿಯ ಆಚರಣೆಯಾಗಿ ಕಾರ್ಯನಿರ್ವಹಿಸುತ್ತದೆ ಮತ್ತು ಸೋಮನಾಥ ದೇವಾಲಯವನ್ನು ಭಾರತದ ಆಧ್ಯಾತ್ಮಿಕ ಪ್ರಜ್ಞೆ ಮತ್ತು ನಂಬಿಕೆಯ ಪ್ರಬಲ ಸಂಕೇತವೆಂದು ಬಣ್ಣಿಸಿದ್ದಾರೆ.

**<>><><*><><<>**

ಕೇಂದ್ರ ಸರ್ಕಾರವು, ವಿಕಸಿತ ಭಾರತ್ - ರೋಜ್‌ಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ) ಕಾಯ್ದೆ, ೨೦೨೫ ರ ಖಾತರಿ ಅನುಷ್ಠಾನಕ್ಕೆ ಸೂಚನೆ ನೀಡಿದೆ. ಜುಲೈ ೧ ರಿಂದ ಈ ಕಾಯ್ದೆಯನ್ನು ರಾಷ್ಟ್ರವ್ಯಾಪಿ ಜಾರಿಗೆ ತರಲಾಗುವುದು ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಪ್ರತಿ ಹಣಕಾಸು ವರ್ಷದಲ್ಲಿ ೧೨೫ ದಿನಗಳ ಕೂಲಿ ಉದ್ಯೋಗವನ್ನು ಖಾತರಿಪಡಿಸುವ ಈ ಕಾಯ್ದೆಯು ಗ್ರಾಮೀಣ

ಭಾರತವನ್ನು ಸಬಲೀಕರಣಗೊಳಿಸುತ್ತದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವಾಲಯ ತಿಳಿಸಿದೆ. ಪ್ರಸಕ್ತ ಹಣಕಾಸು ವರ್ಷದಲ್ಲಿ ೯೫ ಸಾವಿರದ ೭೯೨ ಕೋಟಿ ರೂಪಾಯಿಗಳನ್ನು ಈ ಯೋಜನೆಗೆ ಒದಗಿಸಲಾಗಿದೆ.

**<>><><*><><<>**

ರಾಷ್ಟ್ರೀಯ ತಂತ್ರಜ್ಞಾನ ದಿನದ ಸಂದರ್ಭದಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ ಸಿಂಗ್ ಹಾಗೂ ಇತರ ಗಣ್ಯರು ದೇಶವಾಸಿಗಳಿಗೆ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಉಪರಾಷ್ಟ್ರಪತಿಗಳು, ಪೋಖ್ರಾನ್ ಪರೀಕ್ಷಾ ಶ್ರೇಣಿಯಲ್ಲಿ ಪರಮಾಣು ಪರೀಕ್ಷೆಗಳನ್ನು ನಡೆಸಿದ್ದರ ಸ್ಮರಣಾರ್ಥವಾದ ಈ ದಿನವು ಸ್ವಾವಲಂಬನೆ ಮತ್ತು ಕಾರ್ಯತಂತ್ರದ ಬಲದತ್ತ ದೇಶದ ಪ್ರಯಾಣದಲ್ಲಿ ಒಂದು ನಿರ್ಣಾಯಕ ಕ್ಷಣವನ್ನು ಗುರುತಿಸುತ್ತದೆ ಎಂದು ಹೇಳಿದ್ದಾರೆ. ೧೯೯೮ರಲ್ಲಿ ಪೋಖ್ರಾನ್‌ನಲ್ಲಿ ಯಶಸ್ವಿ ಪರೀಕ್ಷೆಗಳಿಗೆ ಕಾರಣವಾದ ವಿಜ್ಞಾನಿಗಳ ಕಠಿಣ ಪರಿಶ್ರಮ ಮತ್ತು ಸಮರ್ಪಣೆಯನ್ನು ಈ ದಿನ ಭಾರತ ಹೆಮ್ಮೆಯಿಂದ ಸ್ಮರಿಸುತ್ತದೆ ಎಂದು ಪ್ರಧಾನಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಈ ಕ್ಷಣ ಭಾರತದ ವೈಜ್ಞಾನಿಕ ಶ್ರೇಷ್ಠತೆ ಮತ್ತು ಅಚಲ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಪ್ರಧಾನಿ ಹೇಳಿದ್ದಾರೆ. ಸ್ವಾವಲಂಬಿ ರಾಷ್ಟ್ರವನ್ನು ನಿರ್ಮಿಸುವಲ್ಲಿ, ನಾವೀನ್ಯತೆಯನ್ನು ವೇಗಗೊಳಿಸುವಲ್ಲಿ, ಅವಕಾಶಗಳನ್ನು ವಿಸ್ತರಿಸುವಲ್ಲಿ ಮತ್ತು ವಿವಿಧ ಕ್ಷೇತ್ರಗಳಲ್ಲಿ ದೇಶದ ಬೆಳವಣಿಗೆಗೆ ಕೊಡುಗೆ ನೀಡುವಲ್ಲಿ ತಂತ್ರಜ್ಞಾನವು ಪ್ರಮುಖ ಆಧಾರಸ್ತಂಭವಾಗಿದೆ. ಪ್ರತಿಭೆಗಳನ್ನು ಸಬಲೀಕರಣಗೊಳಿಸುವುದು, ಸಂಶೋಧನೆಯನ್ನು ಪ್ರೋತ್ಸಾಹಿಸುವುದು ಮತ್ತು ರಾಷ್ಟ್ರೀಯ ಪ್ರಗತಿ ಮತ್ತು ನಾಗರಿಕರ ಆಕಾಂಕ್ಷೆಗಳನ್ನು ಪೂರೈಸುವ ಪರಿಹಾರಗಳನ್ನು ರಚಿಸುವಲ್ಲಿ ಸರ್ಕಾರದ ನಿರಂತರ ಗಮನ ಉಳಿದಿದೆ ಎಂದು ಅವರು ಒತ್ತಿ ಹೇಳಿದ್ದಾರೆ.

**<>><><*><><<>**

ಪ್ರಸಕ್ತ ಜಾಗತಿಕ ಅನಿಶ್ಚಿತತೆಗಳ ಹಿನ್ನೆಲೆಯಲ್ಲಿ, ವಿದೇಶಿ ವಿನಿಮಯದ ಅಗತ್ಯವಿರುವ ವಸ್ತುಗಳ ಮೇಲಿನ ವೆಚ್ಚವನ್ನು ಕಡಿಮೆ ಮಾಡುವಂತೆ ನಾಗರಿಕರು ಮತ್ತು ವ್ಯಾಪಾರ ಸಂಸ್ಥೆಗಳಿಗೆ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಕರೆ ನೀಡಿದ್ದಾರೆ. ನವದೆಹಲಿಯಲ್ಲಿಂದು ನಡೆದ ಸಿಐಐ ವಾರ್ಷಿಕ ವ್ಯಾಪಾರ ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, "ಪಶ್ಚಿಮ ಏಷ್ಯಾದಲ್ಲಿ ಸಂಘರ್ಷ ಇನ್ನೂ ಮುಂದುವರಿಯುತ್ತಿದ್ದು, ಕದನ ವಿರಾಮವು ಇನ್ನೂ ದೂರದ ಮಾತಾಗಿದೆ. ಆದ್ದರಿಂದ ದೇಶವು ಆರ್ಥಿಕ ರಂಗದಲ್ಲಿ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸುವುದು ಮುಖ್ಯವಾಗಿದೆ ಎಂದು ತಿಳಿಸಿದ್ದಾರೆ. ತಮ್ಮ ದೈನಂದಿನ ಜೀವನದಲ್ಲಿ

ವಿದೇಶಿ ವಿನಿಮಯದ ವೆಚ್ಚವನ್ನು ಎಲ್ಲಿ ಕಡಿಮೆ ಮಾಡಬಹುದು ಎಂಬುದನ್ನು ನಾಗರಿಕರು ಪ್ರಜ್ಞಾಪೂರ್ವಕವಾಗಿ ಗುರುತಿಸಬೇಕು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಮನವಿಯನ್ನು ಉಲ್ಲೇಖಿಸಿದ ಅಶ್ವಿನಿ ವೈಷ್ಣವ್, ಇಂತಹ ವೆಚ್ಚಗಳನ್ನು ಕಡಿಮೆ ಮಾಡುವುದರ ಜೊತೆಗೆ, ವಿದೇಶಿ ವಿನಿಮಯದ ಗಳಿಕೆಯನ್ನು ಹೆಚ್ಚಿಸುವ ಅಗತ್ಯವೂ ಇದೆ ಎಂದು ಹೇಳಿದ್ದಾರೆ. ದೇಶದ ಆರ್ಥಿಕ ಸ್ಥಿತಿಯನ್ನು ಬಲಪಡಿಸಲು ಈ ಎರಡೂ ಪ್ರಯತ್ನಗಳು ಏಕಕಾಲದಲ್ಲಿ ನಡೆಯಬೇಕು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

**ಧ್ವನಿ : ಅಶ್ವಿನಿ ವೈಷ್ಣವ್ (೩೦ ಸೆಕೆಂಡ್‌ಗಳು)**

**<>><><*><><<>**

ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಅವರು ಇಂದು ಆಸ್ಟ್ರೇಲಿಯಾದ ಹವಾಮಾನ ಮತ್ತು ಇಂಧನ ಸಚಿವ ಕ್ರಿಸ್ ಬೋವೆನ್ ಅವರೊಂದಿಗೆ ವರ್ಚುವಲ್ ಸಭೆ ನಡೆಸಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಹವಾಮಾನ ಬದಲಾವಣೆ ಕುರಿತು ಪರಿಹಾರಗಳ ಬಗ್ಗೆ ಈ ವರ್ಷದ ಕೊನೆಯಲ್ಲಿ ಮಾತುಕತೆಗಳನ್ನು ರೂಪಿಸುವ ಪ್ರಮುಖ ಕಾರ್ಯಸೂಚಿಗಳ ಬಗ್ಗೆ ಚರ್ಚಿಸಲಾಗಿದೆ ಎಂದು ಯಾದವ್ ಹೇಳಿದ್ದಾರೆ.

**<>><><*><><<>**

ಹ್ಯಾಂಟವೈರಸ್ ಕಂಡು ಬಂದಿರುವ ಕ್ರೂಸ್ ಹಡಗಿನಲ್ಲಿರುವ ಇಬ್ಬರು ಭಾರತೀಯ ಪ್ರಜೆಗಳು ಸುರಕ್ಷಿತವಾಗಿದ್ದಾರೆ ಎಂದು ಸ್ಪೇನ್‌ನ ಮ್ಯಾಡ್ರಿಡ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ತಿಳಿಸಿದೆ. ಇಬ್ಬರು ಭಾರತೀಯರು ಸೇರಿದಂತೆ ಸುಮಾರು ೧೫೦ ಜನರನ್ನು ಹೊತ್ತ ಡಚ್ ಧ್ವಜದ ಎಂವಿ ಹೊಂಡಿಯಸ್ ಹಡಗು ನಿನ್ನೆ ಸ್ಪೇನ್‌ಗೆ ಆಗಮಿಸಿ, ಸಾಂಕ್ರಾಮಿಕ ರೋಗದ ಕಾರಣದಿಂದಾಗಿ ಕ್ಯಾನರಿ ದ್ವೀಪಗಳಲ್ಲಿ ಲಂಗರು ಹಾಕಿತು. ರಾಯಭಾರ ಕಚೇರಿಯ ಪ್ರಕಾರ, ವಿಶ್ವ ಆರೋಗ್ಯ ಸಂಸ್ಥೆ ಮತ್ತು ಸ್ಪ್ಯಾನಿಷ್ ಅಧಿಕಾರಿಗಳು ಹೊರಡಿಸಿದ ಮಾರ್ಗಸೂಚಿಗಳಿಗೆ ಅನುಗುಣವಾಗಿ ಪ್ರಯಾಣಿಕರು ಹಡಗು ಪ್ರಯಾಣ ಸ್ಥಗಿತಗೊಳಿಸಿದ್ದಾರೆ. ಸಿಬ್ಬಂದಿ ಸದಸ್ಯರಾಗಿ ಕಾರ್ಯ ನಿರ್ವಹಿಸುತ್ತಿದ್ದ ಇಬ್ಬರು ಭಾರತೀಯರನ್ನು ನೆದರ್‌ಲ್ಯಾಂಡ್‌ಗೆ ಸ್ಥಳಾಂತರಿಸಲಾಗಿದೆ, ಅಲ್ಲಿ ಅವರು ಆರೋಗ್ಯ ಸುರಕ್ಷತಾ ಮಾರ್ಗಸೂಚಿಗಳ ಅಡಿಯಲ್ಲಿ ಕ್ವಾರಂಟೈನ್‌ಗೆ ಒಳಗಾಗುತ್ತಾರೆ ಎಂದು ಸ್ಪ್ಯಾನಿಷ್ ರಾಷ್ಟ್ರೀಯ ತುರ್ತು ಮಾನಿಟರಿಂಗ್ ಮತ್ತು ಸಮನ್ವಯ ಕೇಂದ್ರ ತಿಳಿಸಿದೆ. ಸೋಂಕಿಗೊಳಗಾದವರೊಂದಿಗೆ ಸ್ಪ್ಯಾನಿಷ್ ಅಧಿಕಾರಿಗಳು ನಿಕಟ ಸಂಪರ್ಕದಲ್ಲಿದ್ದು ಅವರ ಸುರಕ್ಷತೆ ಮತ್ತು ಯೋಗಕ್ಷೇಮವನ್ನು ಖಚಿತಪಡಿಸಿಕೊಳ್ಳಲು ಪರಿಸ್ಥಿತಿಯನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡುತ್ತಿದ್ದಾರೆ ಎಂದು ಭಾರತೀಯ ರಾಯಭಾರ ಕಚೇರಿ ತಿಳಿಸಿದೆ.

<>><><*><><<>

ಪ್ರಸ್ತುತ ಪ್ರತಿಕೂಲ ಹವಾಮಾನ ಪರಿಸ್ಥಿತಿಗಳಿರುವ ಹಿನ್ನೆಲೆ ಚಾರ್ ಧಾಮ್ ಯಾತ್ರೆ ಯಾತ್ರಿಕರು ಮತ್ತು ಪ್ರವಾಸಿಗರು ಜಾಗರೂಕರಾಗಿರಬೇಕು ಮತ್ತು ಸುರಕ್ಷಿತವಾಗಿ ಪ್ರಯಾಣಿಸಬೇಕು ಎಂದು ಉತ್ತರಾಖಂಡ ಸರ್ಕಾರ ಮನವಿ ಮಾಡಿದೆ.

ನಾಳೆ ಉತ್ತರಾಖಂಡದ ವಿವಿಧ ಭಾಗಗಳಲ್ಲಿ, ವಿಶೇಷವಾಗಿ ಗುಡ್ಡಗಾಡು ಪ್ರದೇಶಗಳಲ್ಲಿ ಮಳೆ ಮತ್ತು ಪ್ರತಿಕೂಲ ಹವಾಮಾನದ ಸಾಧ್ಯತೆಯ ಹಿನ್ನೆಲೆಯಲ್ಲಿ ಭಾರತೀಯ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ನೀಡಿದೆ.

<>><><*><><<>

ಧರ್ಮಶಾಲಾದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ರಾಯ್‌ಪುರದಲ್ಲಿ ಕಳೆದ ರಾತ್ರಿ ನಡೆದ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರು ೨ ವಿಕೆಟ್‌ಗಳ ರೋಚಕ ಗೆಲುವು ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಮುಂಬೈ ಇಂಡಿಯನ್ಸ್ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೮೮ ರನ್ ಗಳಿಸಿತು.

**<>><>< ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ೮.೩೦ ಕ್ಕೆ ><><<>**